# ರಷ್ಯಾದ ವೆಲಿಕಿ ನೋವ್ಗೊರೋಡ್‌ನಲ್ಲಿ ಭಾರತೀಯ ವಿದ್ಯಾರ್ಥಿಗಳ ದುರ್ಮರಣ

ಜೂನ್ 07, 2024

ರಷ್ಯಾದ ವೆಲಿಕಿ ನೋವ್ಗೊರೋಡ್ ನಲ್ಲಿರುವ ಯಾರೋಸ್ಲವ್-ದಿ-ವೈಸ್ ನೋವ್ಗೊರೋಡ್ ಸ್ಟೇಟ್ ಯುನಿವರ್ಸಿಟಿಯಲ್ಲಿ ವ್ಯಾಸಂಗ ಮಾಡುತ್ತಿದ್ದ ನಾಲ್ವರು ಭಾರತೀಯ ವಿದ್ಯಾರ್ಥಿಗಳು ವೋಲ್ಖೋವ್ ನದಿಯಲ್ಲಿ ಮುಳುಗಿ ಸಾವಿಗೀಡಾದ ದುರದೃಷ್ಟಕರ ಘಟನೆ ನಡೆದಿದೆ. ಘಟನೆಯಲ್ಲಿ ಭಾರತ ಮೂಲದ ಐದನೇ ವಿದ್ಯಾರ್ಥಿಯನ್ನು ರಕ್ಷಿಸಲಾಗಿದ್ದು, ಪ್ರಸ್ತುತ ಅವರಿಗೆ ವೈದ್ಯಕೀಯ ಚಿಕಿತ್ಸೆ ಒದಗಿಸಲಾಗುತ್ತಿದೆ.

ಸೈಂಟ್ ಪೀಟರ್ಸ್ ಬರ್ಗ್‌ನಲ್ಲಿರುವ ನಮ್ಮ ರಾಯಭಾರ ಕಚೇರಿಯು ವಿಶ್ವವಿದ್ಯಾಲಯದೊಂದಿಗೆ ಮತ್ತು ಸ್ಥಳೀಯ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಸಾಧ್ಯವಾದ ಎಲ್ಲ ರೀತಿಯ ನೆರವನ್ನೂ ಒದಗಿಸುತ್ತಿದೆ. ಸ್ಥಳೀಯ ತುರ್ತು ಸೇವೆಗಳ ಪಡೆಯು ವೋಲ್ಖೋವ್ ನದಿಯಿಂದ ಇಬ್ಬರ ಮೃತದೇಹಗಳನ್ನು ಹೊರತೆಗೆದಿದೆ. ಮೃತ ವಿದ್ಯಾರ್ಥಿಗಳ ಕುಟುಂಬಕ್ಕೆ ನಾವು ಸಂತಾಪವನ್ನು ಸೂಚಿಸುತ್ತೇವೆ. ನಾಪತ್ತೆಯಾಗಿರುವ ಮತ್ತಿಬ್ಬರು ವಿದ್ಯಾರ್ಥಿಗಳಿಗಾಗಿ ಶೋಧ ಕಾರ್ಯ ಮುಂದುವರಿದಿದೆ. ಈ ಎಲ್ಲ ಐವರು ವಿದ್ಯಾರ್ಥಿಗಳು ಕೂಡ ಮಹಾರಾಷ್ಟ್ರದ ಜಲಗಾಂವ್ ಜಿಲ್ಲೆಗೆ ಸೇರಿದವರು.

ಸೈಂಟ್ ಪೀಟರ್ಸ್ ಬರ್ಗ್‌ನಲ್ಲಿರುವ ನಮ್ಮ ರಾಯಭಾರ ಕಚೇರಿಯು ಮೃತ ವಿದ್ಯಾರ್ಥಿಗಳ ಪಾರ್ಥಿವ ಶರೀರಗಳನ್ನು ಸ್ವದೇಶಕ್ಕೆ ಹಸ್ತಾಂತರಿಸುವ ಪ್ರಕ್ರಿಯೆ ಕುರಿತು ಅಲ್ಲಿನ ಸ್ಥಳೀಯ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸುತ್ತಿದೆ. ಅಲ್ಲದೇ, ಮಹಾರಾಷ್ಟ್ರದ ಜಲಗಾಂವ್ ಜಿಲ್ಲಾಡಳಿತ ಮತ್ತು ಮೃತರ ಕುಟುಂಬ ಸದಸ್ಯರೊಂದಿಗೆ ನಮ್ಮ ರಾಯಭಾರ ಕಚೇರಿಯು ನಿರಂತರ ಸಂಪರ್ಕದಲ್ಲಿದೆ.

ನವದೆಹಲಿ
**ಜೂನ್ 07, 2024**